# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

**ವಿಶೇಷ ರಾಜ್ಯ ಪತ್ರಿಕೆ**

| | | |
|---|---|---|
| ಭಾಗ – ೧<br>Part – I | ಬೆಂಗಳೂರು, ಗುರುವಾರ, ೨೧ ಆಗಸ್ಟ್, ೨೦೨೫ (ಶ್ರಾವಣ ೩೦, ಶಕವರ್ಷ ೧೯೪೭)<br>BENGALURU, THURSDAY, 21 AUGUST, 2025 (SHRAVANA 30, SHAKAVARSHA 1947) | ನಂ. ೪೯೨<br>No. 492 |


## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಬೆಳಗಾವಿ ಜಿಲ್ಲೆಯ ಯರಗಟ್ಟಿ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಒಂದು (01) ನೋಟರಿ ಹುದ್ದೆಯನ್ನು ಸೃಜಿಸುವ ಬಗ್ಗೆ.

**<u>ಓದಲಾಗಿದೆ</u>**:

1. ಮಾನ್ಯ ಶಾಸಕರು, ಸವದತ್ತಿ ಯಲ್ಲಮ್ಮ ವಿಧಾನ ಸಭಾ ಕ್ಷೇತ್ರ, ಬೆಳಗಾವಿ ಜಿಲ್ಲೆ ಇವರ ಪತ್ರ ಸಂಖ್ಯೆ: ಎಮ್ಎಲ್ಎ/ಸವದತ್ತಿ/870/2024-25, ದಿನಾಂಕ :19-09-2024.
2. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ ಜಿಲ್ಲೆರವರ ಕಛೇರಿ ಪತ್ರ ಸಂಖ್ಯೆ: RK/8149/2025, ದಿನಾಂಕ :17-06-2025.

**<u>ಪ್ರಸ್ತಾವನೆ:</u>**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ದಿನಾಂಕ :19-09-2024ರ ಪತ್ರದಲ್ಲಿ ಮಾನ್ಯ ಶಾಸಕರು, ಸವದತ್ತಿ ಯಲ್ಲಮ್ಮ ವಿಧಾನ ಸಭಾ ಕ್ಷೇತ್ರ, ಬೆಳಗಾವಿ ಜಿಲ್ಲೆ ಇವರು ಯರಗಟ್ಟಿ ಕಂದಾಯ ತಾಲ್ಲೂಕಿನಲ್ಲಿ ಕಾರ್ಯಭಾರದ ಒತ್ತಡದಿಂದ ದಿನೆ ಹೆಚ್ಚಾಗುತ್ತಿದ್ದು, ಯರಗಟ್ಟಿ ನ್ಯಾಯಾಲಯದಲ್ಲಿ ಹೆಚ್ಚುವರಿ ನೋಟರಿ ಹುದ್ದೆಯ ಅವಶ್ಯಕತೆ ಇರುತ್ತದೆಂದು, ಒಂದು ಹೆಚ್ಚುವರಿ ನೋಟರಿ ಹುದ್ದೆ ಸೃಜನೆ ಮಾಡುವಂತೆ ಪತ್ರ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ : 17-06-2025ರ ಪತ್ರದಲ್ಲಿ, ಯರಗಟ್ಟಿ ಕಂದಾಯ ತಾಲ್ಲೂಕಿಗೆ ಹೆಚ್ಚುವರಿ ನೋಟರಿ ಹುದ್ದೆ ಅವಶ್ಯಕತೆ ಇದ್ದು, ಹೆಚ್ಚುವರಿ ನೋಟರಿ ಹುದ್ದೆಗಳನ್ನು ಸೃಜಿಸಬಹುದು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ ಜಿಲ್ಲೆ ಇವರು ಅಭಿಪ್ರಾಯ ನೀಡಿರುತ್ತಾರೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ ಜಿಲ್ಲೆ ಇವರ ಅಭಿಪ್ರಾಯದನ್ವಯ ಹಾಗೂ ಯರಗಟ್ಟಿ ತಾಲ್ಲೂಕಿನ ಸಾರ್ವಜನಿಕರಿಗೆ ಅನುಕೂಲವಾಗುವಂತೆ ನೋಟರಿಗಳ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ನಿಯಮಗಳು, 1956ರ ನಿಯಮ 8(4A) ರನ್ವಯ ಹೆಚ್ಚುವರಿಯಾಗಿ ನೋಟರಿ ಹುದ್ದೆಗಳನ್ನು ಸೃಜಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಲಾ-ಎಲ್‌ಸಿಎಲ್/155/2025,</u>**
**<u>ಬೆಂಗಳೂರು, ದಿನಾಂಕ : 21-08-2025</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, **ಬೆಳಗಾವಿ ಜಿಲ್ಲೆಯ ಯರಗಟ್ಟಿ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಒಂದು (01) ನೋಟರಿ** ಹುದ್ದೆಯನ್ನು ಸೃಜಿಸಲಾಗಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಆದಿನಾರಾಯಣ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾನೂನು, ನ್ಯಾಯ ಮತ್ತು
ಮಾನವ ಹಕ್ಕುಗಳ ಇಲಾಖೆ (ಆಡಳಿತ-2).

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH